# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 700(822) |
| ಸದಸ್ಯರ ಹೆಸರು | : ಶ್ರೀ. ಪ್ರತಾಪ್ ಸಿಂಹ ನಾಯಕ್ ಕೆ., (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | : ಗಣಿ ಮತ್ತು ಭೂವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು |
| ಉತ್ತರಿಸಬೇಕಾದ ದಿನಾಂಕ | : 10.03.2026 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಅಡಿಕೆ ಕೊಳೆರೋಗ ನಿಯಂತ್ರಣಕ್ಕೆ ಬಳಸುವ ಬೋರ್ಡೋ ಮಿಶ್ರಣದ ಮೈಲುತುತ್ತ ದರ ದಿಢೀರನೆ ದುಪ್ಪಟ್ಟಾಗಿದ್ದು, ಇದರಿಂದ ರಾಜ್ಯದ ಅಡಿಕೆ ಬೆಳೆಗಾರರು ಅಕ್ಷರಶಃ ಕಂಗಾಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಗಮನಕ್ಕೆ ಬಂದಿರುತ್ತದೆ. |
| ಆ) | ಬಂದಿದ್ದಲ್ಲಿ, ಮೈಲುತುತ್ತ ದರ ದಿಢೀರನೆ ಏರಿಕೆಯಾಗಿರುವುದು ರೈತರಿಗೆ ಸಂಕಷ್ಟ ತಂದಿದ್ದರೂ ಸಹ ಸರ್ಕಾರ ಇದುವರೆಗೆ ದರ ನಿಯಂತ್ರಣಕ್ಕೆ ಯಾವುದೇ ಕ್ರಮ ವಹಿಸದಿರಲು ಕಾರಣಗಳೇನು; | ಪೀಡೆನಾಶಕಗಳ ದರವು ಪೀಡೆನಾಶಕಗಳ ತಯಾರಿಕೆಗೆ ಬಳಕೆಯಾಗುವ ಕಚ್ಚಾ ವಸ್ತುಗಳು ಹಾಗೂ ತಯಾರಿಕಾ ಸಂಸ್ಥೆಗಳ ಮೇಲೆ ಅವಲಂಭಿತವಾಗಿರುತ್ತದೆ. ಬೋರ್ಡೋ ಮಿಶ್ರಣ ತಯಾರಿಕೆಗೆ ಕಾಪರ್ ಸಲ್ಫೇಟ್ ಮತ್ತು ಸುಣ್ಣವನ್ನು ಬಳಸಲಾಗುತ್ತದೆ. ಇತ್ತೀಚಿನ ದಿನಗಳಲ್ಲಿ ಕಾಪರ್ ದರವು ಏರಿಕೆ ಪ್ರವೃತ್ತಿ ಇರುವುದರಿಂದ ಕಾಪರ್ ಸಲ್ಫೇಟ್ ತಯಾರಿಕಾ ವೆಚ್ಚವು ಹೆಚ್ಚಾಗಿರುವುದರಿಂದ ಮಾರುಕಟ್ಟೆಯಲ್ಲಿ ಇದರ ಬೆಲೆ ಗಣನೀಯವಾಗಿ ಏರಿಕೆ ಕಂಡುಬಂದಿರುತ್ತದೆ.<br><br>ಕಾಪರ್ ಸಲ್ಫೇಟ್ ಪೀಡೆನಾಶಕದ ಬೆಲೆಯೂ ಸೇರಿದಂತೆ ಇತರೆ ಪೀಡೆನಾಶಕಗಳ ಬೆಲೆ ನಿಯಂತ್ರಣವು ಕೀಟನಾಶಕ ಕಾಯ್ದೆ, 1968 ಮತ್ತು ಕಾಯ್ದೆಯನ್ನು ರೂಪಿಸಲಾಗಿರುವ ನಿಯಮಾವಳಿಗಳ ವ್ಯಾಪ್ತಿಗೆ ಒಳಪಡುವುದಿಲ್ಲ. ಆದಾಗ್ಯೂ, ತಯಾರಿಕಾ ಸಂಸ್ಥೆಗಳು ನಿಗದಿಪಡಿಸಿರುವ ಗರಿಷ್ಠ ಮಾರಾಟ ಬೆಲೆಗಿಂತ ಹೆಚ್ಚಾಗಿ ಮಾರಾಟ ಮಾಡದಂತೆ ಕೀಟನಾಶಕ ಪರಿವೀಕ್ಷಕರುಗಳ ಮೂಲಕ ರಾಜ್ಯದಲ್ಲಿ ನಿಗಾ ವಹಿಸಲಾಗುತ್ತಿದೆ. |

| | | |
|---|---|---|
| | | ಮೈಲುತುತ್ತ ದರವು ಗರಿಷ್ಠ ಚಿಲ್ಲರೆ ಬೆಲೆ (Maximum Retail Price- MRP) ಗಿಂತ ಹೆಚ್ಚಿನ ದರದಲ್ಲಿ ಮಾರಟಮಾಡುವುದು ಕಂಡು ಬಂದಲ್ಲಿ ನಿಯಮಾನುಸಾರ ಕ್ರಮ ವಹಿಸಲಾಗುತ್ತದೆ. |
| ಇ) | ಅಡಿಕೆ ಕೊಳೆರೋಗದ ನಿಯಂತ್ರಣಕ್ಕೆ ಸರಿಸುಮಾರು 4 ಬಾರಿ ಔಷಧ ಸಿಂಪಡಣೆ ಮಾಡುವುದು ಅನಿವಾರ್ಯವಾಗಿದ್ದು, ಅದಕ್ಕೆ ಅತ್ಯವಶ್ಯವಾಗಿ ಬೇಕಾಗಿರುವ ಮೈಲುತುತ್ತ ದರ ನಿಯಂತ್ರಣಕ್ಕೆ ಸರ್ಕಾರ ತಕ್ಷಣವೇ ಅಗತ್ಯ ಹಾಗೂ ಸೂಕ್ತ ಕ್ರಮ ವಹಿಸುವುದೇ: | ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ (NHM) ಅಡಿಕೆ ಬೆಳೆ ಸೇರಿದಂತೆ ತೋಟಗಾರಿಕೆ ಬೆಳೆಗಳ ಸಮಗ್ರ ರೋಗ/ಕೀಟಗಳ ಹಾಗೂ ಪೋಷಕಾಂಶಗಳ ನಿರ್ವಹಣೆಗಾಗಿ ರೂ.5000/- ಪ್ರತಿ ಹೆಕ್ಟೇರ್ ಘಟಕ ವೆಚ್ಚದಲ್ಲಿ ಶೇ.30ರಂತೆ ಪ್ರತಿ ಹೆಕ್ಟೇರಿಗೆ ರೂ.1500/- ರಂತೆ 2 ಹೆಕ್ಟೇರ್ ವರೆಗೆ ರೂ.3000/- ಗಳ ಸಹಾಯಧನ ನೀಡಲಾಗುತ್ತಿದೆ. |
| ಈ) | ಆರ್ಥಿಕವಾಗಿ ಅತ್ಯಂತ ಸಂಕಷ್ಟದಲ್ಲಿರುವ ರಾಜ್ಯದ ಅಡಿಕೆ ಬೆಳೆಗಾರರ ಹಿತರಕ್ಷಣೆ ಮಾಡುವ ಸಲುವಾಗಿ ಬೋರ್ಡೋ ಮಿಶ್ರಣದ ಮೈಲುತುತ್ತವನ್ನು ಸಂಪೂರ್ಣವಾಗಿ ಉಚಿತವಾಗಿ ನೀಡುವ ಅಥವಾ ಗರಿಷ್ಟ ಮಟ್ಟದ ಸಹಾಯಧನ ನೀಡುವ ಮೂಲಕ ಸಂಕಷ್ಟದಲ್ಲಿರುವ ಅಡಿಕೆ ಬೆಳೆಗಾರರ ಹಿತರಕ್ಷಣೆಗೆ ಸರ್ಕಾರ ಈ ಕೂಡಲೇ ಮುಂದಾಗುವುದೇ? | ಬೋರ್ಡೋ ಮಿಶ್ರಣದ ಮೈಲುತುತ್ತವನ್ನು ಸಂಪೂರ್ಣವಾಗಿ ಉಚಿತವಾಗಿ ನೀಡಲು ಅಥವಾ ಗರಿಷ್ಟ ಮಟ್ಟದ ಸಹಾಯಧನ ನೀಡುವ ಪ್ರಸ್ತಾವನೆ ಇರುವುದಿಲ್ಲ. |

ಸಂಖ್ಯೆ: HORTI 97 HGM 2026

(ಎಸ್. ಎಸ್. ಮಲ್ಲಿಕಾರ್ಜುನ್)
ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು